## 7. ದೇಶದ ಹಲವೆಡೆ ವರ್ಷಾಘಾತ

ಅಸ್ಸಾಂ ಸೇರಿದಂತೆ ಈಶಾನ್ಯ ರಾಜ್ಯಗಳಲ್ಲಿ ಪ್ರವಾಹ ಪರಿಸ್ಥಿತಿ ವಿಕೋಪಕ್ಕೆ ತೆರಳಿದ್ದು, ಜನ ಭಯಭೀತರಾಗಿದ್ದಾರೆ. ಈಶಾನ್ಯ ರಾಜ್ಯಗಳು, ಪಶ್ಚಿಮ ಬಂಗಾಳ, ಉತ್ತರ ಬಿಹಾರ ಸೇರಿದಂತೆ ಹಲವು ರಾಜ್ಯಗಳಲ್ಲಿ ಮಳೆ ಮುಂದುವರಿಯುವುದಾಗಿ ಹೇಳಿರುವ ಹವಾಮಾನ ಇಲಾಖೆ, ರೆಡ್ ಅಲರ್ಟ್ ಘೋಷಿಸಿದೆ. ಈಗಾಗಲೇ ಪ್ರವಾಹಕ್ಕೆ ತುತ್ತಾಗಿರುವ ರಾಜ್ಯಗಳಿಗೆ ಇದು ಇನ್ನಷ್ಟು ಆತಂಕ ಮೂಡಿಸಿದೆ. ಅಸ್ಸಾಂನಲ್ಲಿ ರಕ್ಷಣೆ ಹಾಗೂ ಪರಿಹಾರ ಕಾರ್ಯಕ್ಕೆ ವಾಯುಪಡೆ ಸಜ್ಜಾಗಿದೆ.

ಪೂರ್ವ ಏರ್ ಕಮಾಂಡ್ ಪ್ರವಾಹ ಸ್ಥಿತಿಯನ್ನು ಗಮನಿಸುತ್ತಿದ್ದು, ಎಂಐ 17, ಸುಧಾರಿತ ಲಘು ಹೆಲಿಕಾಪ್ಟರ್ ಸೇರಿದಂತೆ ರಕ್ಷಣಾ ಕಾರ್ಯಾಚರಣೆಗೆ ಅಗತ್ಯವಾದವುಗಳನ್ನು ಸನ್ನದ್ಧವಾಗಿ ಇರಿಸಲಾಗಿದೆ ಎಂದು ವಾಯುಪಡೆ ತಿಳಿಸಿದೆ. ಈಗಾಗಲೇ ಅಸ್ಸಾಂನ 24 ಜಿಲ್ಲೆಗಳಲ್ಲಿ ಪ್ರವಾಹವು ತಲೆದೋರಿದ್ದು, 24 ಲಕ್ಷ ಮಂದಿ ಅತಂತ್ರರಾಗಿದ್ದಾರೆ. 2,254 ಗ್ರಾಮಗಳು ಜಲಾವೃತಗೊಂಡಿವೆ. ಈ ನಡುವೆ, ಅಸ್ಸಾಂನ ಪರಿಸ್ಥಿತಿಯನ್ನು ಗಮನಿಸಿರುವ ವಿಶ್ವಸಂಸ್ಥೆ ಅಗತ್ಯವಿದ್ದರೆ, ಭಾರತ ಸರ್ಕಾರಕ್ಕೆ ನೆರವು ನೀಡುವುದಾಗಿ ಘೋಷಿಸಿದೆ. ಮೇಘಾಲಯದಲ್ಲೂ ಪ್ರವಾಹ ಹೆಚ್ಚಾಗುತ್ತಿದ್ದು, ಸಿಎಂ ಕೊನ್ರಾಡ್ ಸಂಗ್ಮಾ ಅವರೊಂದಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ದೂರವಾಣಿ ಮೂಲಕ ಮಾತುಕತೆ ನಡೆಸಿ, ಎಲ್ಲ ರೀತಿಯ ಸಹಕಾರ ನೀಡುವುದಾಗಿ ಭರವಸೆ ನೀಡಿದ್ದಾರೆ.

**ಸಾವಿನ ಸಂಖ್ಯೆ 5ಕ್ಕೇರಿದೆ:** ಉತ್ತರಾಖಂಡದ ಪಿತ್ತೋರ್‌ಗಡ ಜಿಲ್ಲೆಯಲ್ಲಿ ಸಂಭವಿಸಿದ ಮೇಘಸ್ಫೋಟದಲ್ಲಿ ಮೃತಪಟ್ಟವರ ಸಂಖ್ಯೆ 5ಕ್ಕೇರಿದೆ ಮನೆಗಳ ಅವಶೇಷದಡಿ ಸಿಲುಕಿದ್ದ ಇಬ್ಬರ ಮೃತ ದೇಹಗಳು ಪತ್ತೆಯಾಗಿವೆ. ಇನ್ನೂ 9 ಮಂದಿ ನಾಪತ್ತೆಯಾಗಿದ್ದು, ಶೋಧ ಕಾರ್ಯಾಚರಣೆ ಮುಂದುವರೆದಿದೆ.

**ಧಾರಾಕಾರ ಮಳೆ:** ರಾಷ್ಟ್ರ ರಾಜಧಾನಿ ದೆಹಲಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಧಾರಾಕಾರ ಮಳೆಯಾಗಿದ್ದು, ತಗ್ಗುಪ್ರದೇಶಗಳೆಲ್ಲ ಜಲಾವೃತವಾಗಿವೆ. ರಸ್ತೆಗಳು ಮುಳುಗಡೆಯಾದ ಕಾರಣ ಸಂಚಾರಕ್ಕೆ ಅಡ್ಡಿಯಾಗಿ, ವಾಹನ ಸವಾರರು ಪರದಾಡಿದ್ದಾರೆ. ಇಲ್ಲಿ ಭಾರೀ ಮಳೆಯಾಗುವುದಾಗಿ ಭಾರತೀಯ ಹವಾಮಾನ ಇಲಾಖೆ ಮುನ್ನೆಚರಿಕೆ ನೀಡಿದೆ.

**ಗ್ರಾಮ ಜಲಾವೃತ:** ಕೇರಳದ ಎರ್ನಾಕುಳಂ ಜಿಲ್ಲೆಯ ಕುಟ್ಟಂಪುಳ ಗ್ರಾಮವು ಮಳೆಯಿಂದಾಗಿ ಜಲಾವೃತಗೊಂಡಿದೆ. ಸಣ್ಣಪುಟ್ಟ ತೊರೆ, ಕಾಲುವೆಗಳು ತುಂಬಿ ಹರಿದು, ಅಕ್ಕಪಕ್ಕದ ಮನೆಗಳಿಗೆ ನೀರು ನುಗ್ಗಿವೆ. ಇಲ್ಲಿ ಸಿಲುಕಿದ್ದ ಅನೇಕರನ್ನು ನಂತರ ಸುರಕ್ಷಿತ ಪ್ರದೇಶಗಳಿಗೆ ಸ್ಥಳಾಂತರಿಸಲಾಯಿತು.

**ಗೋಡೆ ಕುಸಿತ:** ಉತ್ತರಾಖಂಡದ ಹರಿದ್ವಾರದಲ್ಲಿ ಭಾರೀ ಸಿಡಿಲು ಬಡಿದ ಪರಿಣಾಮ, ಹರಿ ಕಿ ಪೌರಿಯಲ್ಲಿ ಗೋಡೆ ಕುಸಿದು ಬಿದ್ದಿದೆ. ಬ್ರಹ್ಮಕುಂಡ್‌ನಲ್ಲಿ ಸಿಡಿಲು ಬಡಿದಾಗ ಅಲ್ಲೇ ಇದ್ದ ಟ್ರಾನ್ಸ್‌ಫಾರ್ಮರ್‌ಗೆ ಬೆಂಕಿ ಹೊತ್ತಿಕೊಂಡಿತು ಹಾಗೂ ಗೋಡೆ ಕುಸಿದುಬಿತ್ತು ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ಅದೃಷ್ಟವಶಾತ್ ಯವುದೇ ಪ್ರಾಣಹಾನಿ ಸಂಭವಿಸಿಲ್ಲ. ಇದೇ ವೇಳೆ, ಜಮ್ಮು ಮತ್ತು ಕಾಶ್ಮೀರದ ಪೂಂಛ್ ಜಿಲ್ಲೆಯಲ್ಲೂ ಸಿಡಿಲು ಬಡಿದು ಇಬ್ಬರು ಸ್ಥಳದಲ್ಲೇ ಸಾವಿಗೀಡಾದ ಘಟನೆ ನಡೆದಿದೆ.

ಆಧಾರ:ಉದಯವಾಣಿ, ದಿನಾಂಕ:22.07.2020